# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1111 |
| ಸದಸ್ಯರ ಹೆಸರು | : ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 29.09.2020 |
| ಉತ್ತರಿಸುವ ಸಚಿವರು | : ಸಹಕಾರ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸಹಕಾರ ಇಲಾಖಾಯ ವಿವಿಧ ವಿಭಾಗಗಳಲ್ಲಿ ಸಿಬ್ಬಂದಿ ವರ್ಗದವರು ಅವ್ಯವಹಾರಗಳಲ್ಲಿ ಭಾಗಿಯಾಗಿರುವ ಎಷ್ಟು ಪ್ರಕರಣಗಳು ಗುರುತಿಸಲ್ಪಟ್ಟಿವೆ; ಅವರುಗಳ ಮೇಲೆ ಕಾನೂನು ಪ್ರಕಾರ ತೆಗೆದುಕೊಂಡಿರುವ ಕ್ರಮಗಳೇನು: (ಕಳೆದ 2 ವರ್ಷಗಳ ಮಾಹಿತಿ ನೀಡುವುದು) | ಸಹಕಾರ ಇಲಾಖೆಯ ವ್ಯಾಪ್ತಿಗೊಳಪಡುವ 4 ಇಲಾಖೆಗಳ ಸಿಬ್ಬಂದಿ ವರ್ಗದವರು ಅವ್ಯವಹಾರಗಳಲ್ಲಿ ಭಾಗಿಯಾಗಿರುವ ಪ್ರಕರಣಗಳ ಎರಡು ವರ್ಷಗಳ ಮಾಹಿತಿಯು ಈ ಕೆಳಕಂಡಂತಿದೆ:-<br><br>ಕ್ರ.ಸಂ. / ಇಲಾಖೆ / ಪ್ರಕರಣಗಳ ಸಂಖ್ಯೆ<br>1 / ಸಹಕಾರ ಸಂಘಗಳ ನಿಬಂಧಕರ ಇಲಾಖೆ / 06<br>2 / ಕೃಷಿ ಮಾರಾಟ ಇಲಾಖೆ / 19<br>3 / ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ / ಯಾವುದು ಇರುವುದಿಲ್ಲ<br>4 / ಕರ್ನಾಟಕ ರಾಜ್ಯ ಉಗ್ರಾಣ ನಿಗಮ / 09<br><br>ಅವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು, 1957ರನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ | ಎಷ್ಟು ಜನರನ್ನು ಅಮಾನತ್ತುಗೊಳಿಸಿ ಶಿಸ್ತು ಕ್ರಮಗಳನ್ನು ಕೈಗೊಳ್ಳಲಾಗಿದೆ: ಕೋರ್ಟಿನ ಮುಂದೆ ಎಷ್ಟು ಪ್ರಕರಣಗಳಿವೆ: | 31 ಜನರನ್ನು ಅಮಾನತ್ತಿನಲ್ಲಿರಿಸಿದ್ದು, ನಿಯಮಾನುಸಾರ ವಿಚಾರಣೆ ನಡೆಸಿ ಶಿಸ್ತು ಕ್ರಮ ಜರುಗಿಸಲಾಗುತ್ತಿದೆ.<br><br>ಸಹಕಾರ ಸಂಘಗಳ ನಿಬಂಧಕರ ಇಲಾಖೆಗೆ ಸಂಬಂಧಿಸಿದ 1 ಪ್ರಕರಣ ಮಾತ್ರ ನ್ಯಾಯಾಲಯದಲ್ಲಿ ಬಾಕಿ ಇರುತ್ತದೆ. |
| ಇ | ಇಲಾಖೆಯ ಸಿಬ್ಬಂದಿ ವರ್ಗದವರು ಮಾದರಿ ಸರ್ಕಾರಿ ನೌಕರರು ಮತ್ತು ಅಧಿಕಾರಿಗಳಾಗಿ ನಿಷ್ಠೆಯಿಂದ ಕರ್ತವ್ಯ ನಿರ್ವಹಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಇಲಾಖೆಯ ಸಿಬ್ಬಂದಿ ವರ್ಗದವರು ಕರ್ತವ್ಯ ನಿರ್ವಹಣೆಯಲ್ಲಿ ನಿರ್ಲಕ್ಷತನ ತೋರಿದಲ್ಲಿ ತಿಳುವಳಿಕೆ ಪತ್ರ, ನೋಟೀಸ್ ನೀಡಿ ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸುವಂತೆ ತಿಳಿಸುವ ಹಾಗೂ ಕಾರ್ಯಕ್ಷಮತೆಯನ್ನು ಹೆಚ್ಚಿಸಿಕೊಳ್ಳಲು ಕಾಲಕಾಲಕ್ಕೆ ಅವಶ್ಯಕ ತರಬೇತಿ / ಸಲಹೆ ಸೂಚನೆಗಳನ್ನು ನೀಡುವ ಮೂಲಕ ಮಾದರಿ ಸರ್ಕಾರಿ ಅಧಿಕಾರಿ / ನೌಕರರಾಗಿ ನಿಷ್ಠೆಯಿಂದ ಕರ್ತವ್ಯ ನಿರ್ವಹಣೆ ಮಾಡಲು ಕ್ರಮಗಳನ್ನು ಕೈಗೊಳ್ಳಲಾಗಿದೆ. |

ಸಂಖ್ಯೆ: ಸಇ 148 ರರವಿ 2020

(ಎಸ್.ಟಿ.ಸೋಮಶೇಖರ್)
ಸಹಕಾರ ಸಚಿವರು